# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 992 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 27/12/2022 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ | ಪ್ರಸ್ತುತ ಬೀದರ್ ನಗರಸಭೆ ಚುನಾವಣೆ ನಡೆದಿದ್ದು ಯಾವ ದಿನಾಂಕದಂದು; | ಬೀದರ್ ನಗರಸಭೆಗೆ ಚುನಾವಣೆ ನಡೆದಿರುವ ದಿನಾಂಕ:27/04/2021. |
| ಆ | ಇದುವರೆವಿಗೂ ಈ ನಗರಸಭೆ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆ ಮಾಡದಿರಲು ಕಾರಣವೇನು; ಇದರಲ್ಲಿ ಏನಾದರೂ ಉದ್ದೇಶವಿದೆಯೇ; | ಸರ್ಕಾರದ ಪತ್ರ ಸಂಖ್ಯೆ: ನಅಇ 229 ಎಂಎಲ್‌ಆರ್ 2022; ದಿನಾಂಕ:17/09/2022 ರಲ್ಲಿ ದಿನಾಂಕ:08/10/2020 ರ ಅಧಿಸೂಚನೆಯನ್ವಯ ಬೀದರ್ ನಗರಸಭೆಯ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರ ಸ್ಥಾನಗಳಿಗೆ ನಿಯಮಾನುಸಾರ ಚುನಾವಣೆ ನಡೆಸುವಂತೆ ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ರವರಿಗೆ ನಿರ್ದೇಶನ ನೀಡಲಾಗಿರುತ್ತದೆ. |
| ಇ | ಚುನಾವಣೆ ಮಾಡುವುದಾದರೆ ಯಾವ ಕಾಲಮಿತಿಯೊಳಗೆ ಮಾಡಲಾಗುವುದು; | |
| ಈ | ಚುನಾಯಿತ ಆಡಳಿತ ಮಂಡಳಿ ಇರದೇ ಸಾರ್ವಜನಿಕರು ತುಂಬ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದು ಸಂವಿಧಾನದ ಹಾಗೂ ಚುನಾಯಿತ ಪ್ರತಿನಿಧಿಗಳ ಹಕ್ಕು ಉಲ್ಲಂಘನೆ ಮಾಡಿದಂತಾಗುತ್ತಿಲ್ಲವೇ; ಇದಕ್ಕೆ ಕಾರಣಕರ್ತರ್‍ಯಾರು? | ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 92 ಎಂಎಲ್‌ಆರ್ 2018; ದಿನಾಂಕ:12/03/2019 ರಲ್ಲಿ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಸೆಕ್ಷನ್–315 ರನ್ವಯ ಆಡಳಿತಾತ್ಮಕ ಹಿತದೃಷ್ಟಿಯಿಂದ ಹೊಸ ಚುನಾಯಿತ ಕೌನ್ಸಿಲ್ ಅಸ್ತಿತ್ವಕ್ಕೆ ಬರುವವರೆಗೂ ನಗರ ಸ್ಥಳೀಯ ಸಂಸ್ಥೆಗಳ ದೈನಂದಿನ ಕಾರ್ಯನಿರ್ವಹಣೆಗಾಗಿ ಆಡಳಿತಾಧಿಕಾರಿಗಳನ್ನು ನೇಮಕ ಮಾಡಿ ಆದೇಶಿಸಲಾಗಿರುತ್ತದೆ. |

**ಸಂಖ್ಯೆ:ನಅಇ 67 ಎಲ್‌ಸಿಕ್ಯೂ 2022.**

(ಎನ್. ನಾಗರಾಜು ಎಂ ಟಿ ಬಿ)
ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು